# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/64 /2011-12 ದಿನಾಂಕ: 16-01-2012

## ಸಭಾಹ್ವಾನ ಪತ್ರ

ದಿನಾಂಕ: **27-01-2012**ರಂದು **ಶುಕ್ರವಾರ** ಮ: **12-30** ಗಂಟೆಗೆ ಶ್ರೀ ಬಿ.ಆರ್.ಸತ್ಯನಾರಾಯಣ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

/2012

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ದಿನಾಂಕ: 11-11-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ವಿಚಾರ
2. ದಿನಾಂಕ: 29-12-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
3. ದಿನಾಂಕ: 06-01-2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
4. 07-01-2012ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
5. ದಿನಾಂಕ: 30-01-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
6. ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುವ ಜಿಲ್ಲಾ ಪಂಚಾಯತ್ ಕಾಮಗಾರಿಗಳ ಬಗ್ಗೆ.
7. ಜಿಲ್ಲಾ ಪಂಚಾಯತ್ ವಿಭಾಗದ ಟೆಂಡರ್ ಮೊತ್ತದಲ್ಲಿ ಉಳಿತಾಯವಾಗುವ ಹಣವನ್ನು ಖರ್ಚು ಮಾಡುವ ಬಗ್ಗೆ ಚರ್ಚಿಸಲು ಅಧೀಕ್ಷಕ ಅಭಿಯಂತರರನ್ನು ಕರೆಸುವ ಬಗ್ಗೆ.
8. ದರಖಾಸ್ತು ಜಮೀನನ್ನು ದುರಸ್ತಿ ಮಾಡುವಾಗ ವಿಳಂಬವಾಗುತ್ತಿರುವ ಬಗ್ಗೆ ಹಾಗೂ ವಾಸಸ್ಥಳ ದೃಢೀಕರಣ ಪಡೆಯುವಾಗ ಆಗುವ ತೊಂದರೆ ಬಗ್ಗೆ.
9. ಹಾಸನ ಜಿಲ್ಲೆಯ ಹಾಸನ, ಬೇಲೂರು, ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಅರಸೀಕೆರೆ ತಾಲ್ಲೂಕುಗಳ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಉನ್ನತೀಕರಿಸುವ ಬಗ್ಗೆ.
10. ಚಿರತೆ ಹಾವಳಿ ಬಗ್ಗೆ.
11. ರಾಜನಶಿರಿಯೂರು ಗ್ರಾಮಕ್ಕೆ ಬಿ.ಸಿ.ಎಂ. ಹಾಸ್ಟೆಲ್ ಮಂಜೂರು ಮಾಡುವ ಬಗ್ಗೆ
12. ದಿನಾಂಕ: 06-12-2011ರಂದು ಅರಕಲಗೂಡು ತಾ: ಸಂತೆಮರೂರು ಗ್ರಾಮದಲ್ಲಿ 8ನೇ ತರಗತಿಯ ಬಾಲಕ ಚಿರತೆಯ ದಾಳಿಗೆ ಬಲಿಯಾದ ಬಗ್ಗೆ.
13. ಬೇಲೂರಿನಲ್ಲಿ ಸ್ಪೈಕರ್ಸ್ ಕಪ್-2012 ನಡೆಸುತ್ತಿದ್ದು, ಜಿಲ್ಲಾ ಪಂಚಾಯಿತಿಯಿಂದ ಆರ್ಥಿಕ ಸಹಾಯ ಕೋರಿ

1-2012

14. ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ದಿ: 23-02-2012ರಿಂದ 26-02-2012ರವರೆಗೆ ನಡೆಯುವ 33ನೇ ರಾಷ್ಟ್ರೀಯ ಹಿರಿಯ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವ ಹಾಸನ ಜಿಲ್ಲಾ ಹಿರಿಯ ಕ್ರೀಡಾಪಟುಗಳಿಗೆ ಕ್ರೀಡಾ ಸಮವಸ್ತ್ರಗಳಿಗೆ ಧನ ಸಹಾಯ ಮಾಡುವ ಬಗ್ಗೆ.
15. ಗೋವಾದಲ್ಲಿ ನಡೆಯುವ 5ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಲು ಧನಸಹಾಯ ನೀಡುವ ಬಗ್ಗೆ.
16. ಹಾಸನ ಜಿಲ್ಲೆಯಲ್ಲಿ ಬರಗಾಲ ಉಂಟಾಗಿರುವ ಹಿನ್ನಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಹೆಚ್ಚುವರಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಲೋಕಸಭಾ ಸದಸ್ಯರು,ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪ ಕಾರ್ಯದರ್ಶಿ( ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯ ನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
15. ಉಪ ನಿರ್ದೇಶಕರು, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆ, ಹಾಸನ.
16. ಕಛೇರಿ ಪ್ರತಿ.

**ದಿನಾಂಕ: 27-01-2012ರಂದು ಅಪರಾಹ್ನ:12-30 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು**

**ಅಧ್ಯಕ್ಷತೆ: ಶ್ರೀ ಬಿ.ಆರ್.ಸತ್ಯನಾರಾಯಣ**

**ಆಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ಹಾಜರಿ: 44

ಗೈರು ಹಾಜರಿ:14

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಮಾನ್ಯ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ದಿನಾಂಕ: 11-11-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಕುರಿತು. | ದಿನಾಂಕ: 11-11-2012 ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವಂತೆ ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಆರ್.ಸತ್ಯನಾರಾಯಣರವರು ಸಭೆಯನ್ನು ಕೋರಿದರು. | ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿದ ನಂತರ ದಿ:11-11-2011 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು. |
| 2 | ದಿನಾಂಕ: 29-12-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 29-12-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಆರ್.ಸತ್ಯನಾರಾಯಣರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಸಭಾ ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣೀರವರು ಮಾತನಾಡುತ್ತಾ, ವಯಸ್ಕರ ಶಿಕ್ಷಣ ಇಲಾಖೆಗೆ ಲಿಂಕ್ ಡಾಕ್ಯುಮೆಂಟಿನಲ್ಲಿ ರೂ.10.00ಲಕ್ಷಗಳು ನಿಗದಿಯಾಗಿದ್ದು, ಅದರಲ್ಲಿ ರೂ.7.50ಲಕ್ಷಗಳು ಬಿಡುಗಡೆಯಾಗಿರುತ್ತದೆ. ಹಿಂದುಳಿದ ತಾಲ್ಲೂಕುಗಳಲ್ಲಿ ಅನಕ್ಷರಸ್ಥರಿಗೆ ಅಕ್ಷರ ಕಲಿಸುತ್ತಿರುವವರಿಗೆ ರೂ.300/-ರಂತೆ ಮಾಸಿಕ ಗೌರವಧನವನ್ನು ನೀಡುವಂತೆ ಕೋರಿರುತ್ತಾರೆ ಈ ಬಗ್ಗೆ ವಿವರಗಳನ್ನು ನೀಡಬೇಕೆಂದು ಕೋರಿದರು. | ಸಮಗ್ರ ಚರ್ಚೆಯ ನಂತರ ದಿ: 29-12-2011 ರಂದು ನಡೆದ ಹಣಕಾಸು, ಲೆಕ್ಕ ಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಿತು. |

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಯವರು ಉತ್ತರಿಸುತ್ತಾ, ಹಿಂದುಳಿದ ತಾಲ್ಲೂಕುಗಳಲ್ಲಿ 550 ಕಲಿಕಾ ಕೇಂದ್ರಗಳಲ್ಲಿ ಅಕ್ಷರ ಕಲಿಸುತ್ತಿರುವ ಸ್ವಯಂಸೇವಕರಿಗೆ ಮಾಸಿಕ ಗೌರವಧನ ನೀಡಲು ಮನವಿ ಮಾಡಲಾಗಿದೆ ಎಂದು ಸಭೆಗೆ ವಿವರ ನೀಡಿದರು

ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ವೃತ್ತಿ ತರಬೇತಿ ಕಾರ್ಯಕ್ರಮವನ್ನು ಉತ್ತಮವಾಗಿ ಅನುಷ್ಠಾನ ಮಾಡಿದ್ದಾರೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ತಮ್ಮ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ವೃತ್ತಿ ಕೌಶಲ್ಯ ತರಬೇತಿ ಮತ್ತು ಅಕ್ಷರ ಕಲಿಕಾ ಕಂದ್ರಗಳಲ್ಲಿ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದು, ಸ್ವಯಂ ಸೇವಕರಿಗೆ ಮಾಸಿಕ ಗೌರವಧನ ನೀಡುವುದು ಸೂಕ್ತವಾಗಿರುತ್ತದೆ. ಆದರೆ ರೂ.300/-ಗಳ ಗೌರವಧನವು ತುಂಬಾ ಕಡಿಮೆಯಾಗಿದ್ದು, ಗೌರವ ಧನವನ್ನು ಹೆಚ್ಚು ಮಾಡಬೇಕೆಂದು ಕೋರಿದರು.

ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಕಲಿಕಾ ಕೇಂದ್ರಗಳಿಗಿಂತ ವೃತ್ತಿ ತರಬೇತಿ ಉತ್ತಮವಾಗಿರುತ್ತದೆ. ಆದ್ದರಿಂದ ಅಕ್ಷರ ಕಲಿಕಾ ಕೇಂದ್ರಗಳಿಗೆ ವಿನಿಯೋಗಿಸುವ ಹಣವನ್ನು ವೃತ್ತಿ ತರಬೇತಿ ಕಾರ್ಯಕ್ರಮಕ್ಕೆ ವರ್ಗಾವಣೆ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅನಕ್ಷರಸ್ಥರಿಗೆ ಅಕ್ಷರ ಕಲಿಕೆ ಮತ್ತು ವೃತ್ತಿ ಕೌಶಲ್ಯ ತರಬೇತಿ ನೀಡುತ್ತಿರುವ ಬಗ್ಗೆ ಕಲಿಕಾ ಕೇಂದ್ರಗಳು ಹಾಗೂ ವೃತ್ತಿ ಕೌಶಲ್ಯ ತರಬೇತಿ ಕೇಂದ್ರಗಳ ಪಟ್ಟಿಯನ್ನು ಎಲ್ಲಾ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ನೀಡಲು ಕ್ರಮ ವಹಿಸುವಂತೆ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಯವರಿಗೆ ಸೂಚಿಸಿದರು ಮತ್ತು ಕಲಿಕಾ ಕೇಂದ್ರಗಳಲ್ಲಿ ಅಕ್ಷರ ಕಲಿಸುತ್ತಿರುವ ಸ್ವಯಂಸೇವಕರಿಗೆ ಗ್ರಾಮ ಪಂಚಾಯಿತಿ ವತಿಯಿಂದ ಒಂದು ತಿಂಗಳ ಮಾಸಿಕ ಗೌರವಧನ ರೂ.300/-ಗಳನ್ನು ನೀಡುವಂತೆ ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.

ಮುಂದುವರೆದು ವೃತ್ತಿ ಕೌಶಲ್ಯ ತರಬೇತಿಯನ್ನು ಎಸ್.ಜಿ.ಎಸ್.ವೈ ಯೋಜನೆಯ ಸಹಕಾರ ದೊಂದಿಗೆ ಅನುಷ್ಠಾನ ಮಾಡಲು ಉದ್ದೇಶಿಸಲಾಗಿದ್ದು, ತರಬೇತಿ ಪಡೆದ ಅಭ್ಯರ್ಥಿಗಳಿಗೆ ಬ್ಯಾಂಕುಗಳ ಮೂಲಕ ಸಾಲ ಮಂಜೂರು ಮಾಡಿಸಿ, ಆರ್ಥಿಕ ಮಟ್ಟ ಸುಧಾರಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, 2012-13ನೇ ಸಾಲಿಗೆ ವಾರ್ಷಿಕ ಕರಡು ಯೋಜನೆಯನ್ನು ಸರ್ಕಾರದ ಅನುಮೋದನೆಗೆ ಕಳುಹಿಸಲು ನಿರ್ಣಯಿಸಲಾಗಿದೆ. ಆದರೆ ವಾರ್ಷಿಕ ಕರಡು ಯೋಜನೆಯನ್ನು ಸದಸ್ಯರ ಗಮನಕ್ಕೆ ತಂದಿರುವುದಿಲ್ಲ. ಈ ಬಗ್ಗೆ ವಿವರಗಳನ್ನು ನೀಡುವಂತೆ ಕೋರಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಲಿಂಕ್ ಡಾಕ್ಯುಮೆಂಟಿನಲ್ಲಿ ನಿಗದಿಪಡಿಸುವ ಅನುದಾನಕ್ಕೆ ಸಂಬಂಧಿಸಿದಂತೆ, ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಗಳ ಯೋಜನೆಗಳಿಗೆ ಸಂಬಂಧಿಸಿದಂತೆ, ಜಿಲ್ಲಾ ಪಂಚಾಯಿತಿಯಿಂದ ಪ್ರತಿ

| | | | |
|---|---|---|---|
| | | ವರ್ಷವೂ ಕರಡು ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಬೇಕಾಗಿರುತ್ತದೆ. ಅದರಂತೆ, 2012-13ನೇ ಸಾಲಿಗೂ ಸಹ ವಾರ್ಷಿಕ ಕರಡು ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಸಲ್ಲಿಸಲಾಗಿದೆ ಎಂದು ತಿಳಿಸುತ್ತಾ, ಈ ಬಗ್ಗೆ ವಿವರಗಳನ್ನು ಜಿಲ್ಲಾ ಪಂಚಾಯಿತಿ ಸದಸ್ಯರಿಗೆ ನೀಡುವಂತೆ ಮುಖ್ಯ ಯೋಜನಾಧಿಕಾರಿಯವರಿಗೆ ತಿಳಿಸಿದರು. | |
| 3 | ದಿನಾಂಕ: 24-09-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 24-09-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸದಸ್ಯರಾದ ಶ್ರೀಮತಿ ಎಂ.ವಿ.ಹೇಮಾವತಿ ಮಂಜುನಾಥ್ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡತ್ತಾ, ಬೆಂಗಳೂರಿನಲ್ಲಿ ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸದಸ್ಯರ ಕಾರ್ಯಾಗಾರದಲ್ಲಿ ಅಡುಗೆ ಕೋಣೆಗಳ ನಿರ್ಮಾಣಕ್ಕೆ ಸಂಬಂಧಿಸಿದಂತೆ, ನಿಗದಿಪಡಿಸಿರುವ ರೂ.60000/-ಗಳ ಅನುದಾನ ತುಂಬಾ ಕಡಿಮೆಯಿದ್ದು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುದಾನ ಹೊಂದಾಣಿಕೆ ಮಾಡಿಕೊಂಡು ನಿರ್ಮಾಣ ಮಾಡಲು ಸನ್ಮಾನ್ಯ ಶಿಕ್ಷಣ ಸಚಿವರು ತಿಳಿಸಿರುತ್ತಾರೆ. ತುಮಕೂರು ಜಿಲ್ಲೆಯಲ್ಲಿ ಈಗಾಗಲೇ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುದಾನ ಹೊಂದಾಣಿಕೆ ಮಾಡಿಕೊಂಡು ನಿರ್ಮಾಣ ಮಾಡಲು ಪ್ರಾರಂಭಿಸಿದ್ದಾರೆ. ಅದೇ ರೀತಿಯಲ್ಲಿ ಹಾಸನ ಜಿಲ್ಲೆಯಲ್ಲಿಯೂ ಸಹ ಅಡುಗೆ ಕೋಣೆಗಳ ಕಾಮಗಾರಿಯನ್ನು ಅನುಷ್ಠಾನ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅಡುಗೆ ಕೋಣೆಗಳ ಕಾಮಗಾರಿಗಳನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುದಾನ ಹೊಂದಾಣಿಕೆ ಮಾಡಿಕೊಂಡು ಅನುಷ್ಠಾನ ಮಾಡುವ ಬಗ್ಗೆ ಸರ್ಕಾರದಿಂದ ನಿರ್ಧಿಷ್ಟ ಆದೇಶಗಳು ಯಾವುದೂ ಬಂದಿರುವುದಿಲ್ಲ. ಆದಾಗ್ಯೂ ಸಹ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರ ಸಲಹೆಯಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅಡುಗೆ ಕೋಣೆಗಳ ನಿರ್ಮಾಣಕ್ಕೆ ರೂ.60000/-ಗಳ ಅನುದಾನ ಸಾಕಾಗುವುದಿಲ್ಲವೆಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅಡುಗೆ ಕೋಣೆಗಳನ್ನು ಕಡಿಮೆ ಅನುದಾನದಲ್ಲಿ ನಿರ್ಮಿಸುವ ಬಗ್ಗೆ 2-3 ಸಂಸ್ಥೆಯವರೊಂದಿಗೆ ಚರ್ಚಿಸಲಾಗಿದೆ. ಸಂಸ್ಥೆಯವರು ಕಡಿಮೆ ದರದಲ್ಲಿ ನಿರ್ಮಿಸಿಕೊಡಲು ಒಪ್ಪಿದಲ್ಲಿ ಅವರಿಗೆ ಅಡುಗೆ ಕೋಣೆಗಳನ್ನು ವಹಿಸಲಾಗುವುದು ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ | ದಿ:24-09-11 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |

ಯೋಜನೆಯಡಿ ಅವಕಾಶವಿದ್ದಲ್ಲಿ ಕ್ರಮ ವಹಿಸಿ ಅಡುಗೆ ಕೋಣೆಗಳನ್ನು ನಿರ್ಮಿಸಲಾಗುವುದು ಎಂದು ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಶಿಕ್ಷಕರು ತಮ್ಮ ವೈದ್ಯಕೀಯ ಚಿಕಿತ್ಸೆಗಾಗಿ ಭರಿಸಿರುವ ಹಣವನ್ನು ಮರು ಪಡೆಯಲು ವೈದ್ಯಕೀಯ ವೆಚ್ಚದ ಬಿಲ್ಲನ್ನು ಜಿಲ್ಲಾ ಪಂಚಾಯಿತಿಗೆ ಕಳುಹಿಸಿದ್ದರೂ ಸಹ ಇಲ್ಲಿಯವರೆಗೆ ಮಂಜೂರಾಗಿರುವುದಿಲ್ಲ. ಶಿಕ್ಷಕರು ವೈದ್ಯಕೀಯ ವೆಚ್ಚಕ್ಕಾಗಿ ಸಾಲ ಮಾಡಿರುತ್ತಾರೆ ಮತ್ತು ಆಸ್ತಿಯನ್ನೂ ಸಹ ಮಾರಾಟ ಮಾಡಿರುತ್ತಾರೆ. ವೈದ್ಯಕೀಯ ವೆಚ್ಚಕ್ಕಾಗಿ ಉಪ ನಿರ್ದೇಶಕರ ಕಛೇರಿಗೆ ಸಲ್ಲಿಸಿದಲ್ಲಿ ಉಪ ನಿರ್ದೇಶಕರು ಆಯುಕ್ತರ ಕಛೇರಿಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ. ಆಯುಕ್ತರು ಉಪ ನಿರ್ದೇಶಕರ ಹಂತದಲ್ಲಿಯೇ ಕ್ರಮ ವಹಿಸುವಂತೆ ಸೂಚಿಸಿ ಪ್ರಸ್ತಾವನೆಯನ್ನು ಹಿಂದಕ್ಕೆ ಕಳುಹಿಸಿರುತ್ತಾರೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರ ಕಛೇರಿಗೆ ಪ್ರಸ್ತಾವನೆಯನ್ನು ಕಳುಹಿಸಿದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಸಿಬ್ಬಂದಿಯವರ ಕೊರತೆಯಿದೆಯೆಂದು ತಿಳಿಸಿ ಪ್ರಸ್ತಾವನೆಯನ್ನು ಪರಿಶೀಲಿಸಿರುವುದಿಲ್ಲ. ಇದರಿಂದ, ಶಿಕ್ಷಕರಿಗೆ ಔಷಧಿಯನ್ನು ತೆಗೆದುಕೊಳ್ಳಲು ಹಣ ಇಲ್ಲ. ಒಬ್ಬ ಶಿಕ್ಷಕರು 2 ಮೂತ್ರಪಿಂಡಗಳನ್ನು ಕಳೆದುಕೊಂಡಿದ್ದು, ಇವರಿಗೆ 2 ವರ್ಷಗಳಿಂದ ಯಾವುದೇ ಹಣ ನೀಡಿರುವುದಿಲ್ಲ. ಆದ್ದರಿಂದ, ವೈದ್ಯಕೀಯ ವೆಚ್ಚದ ಮರುಪಾವತಿ ಬಗ್ಗೆ ತ್ವರಿತವಾಗಿ ಸೂಕ್ತ ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಈ ವಿಷಯದ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ವೈದ್ಯಕೀಯ ವೆಚ್ಚದ ಮರುಪಾವತಿಗೆ ಸಂಬಂಧಿಸಿದಂತೆ, ಜಿಲ್ಲಾ ಮಟ್ಟದಲ್ಲಿ ಒಂದು ಸಮಿತಿಯನ್ನು ರಚಿಸಿ ಸದರಿ ಸಮಿತಿಯಲ್ಲಿ ಮೆಡಿಕಲ್ ಕಾಲೇಜು, ಜಿಲ್ಲಾ ಆಸ್ಪತ್ರೆಯಿಂದ ತಾಂತ್ರಿಕ ಪರಿಶೀಲನೆಗಾಗಿ ಸಿಬ್ಬಂದಿಯವರನ್ನು ಸದಸ್ಯರನ್ನಾಗಿ ಆಯ್ಕೆ ಮಾಡಿ ವೈದ್ಯಕೀಯ ವೆಚ್ಚದ ಮರು ಪಾವತಿ ಬಿಲ್ಲುಗಳನ್ನು ತ್ವರಿತವಾಗಿ ವಿಲೇ ಮಾಡಲು ಅಗತ್ಯ ಕ್ರಮ ವಹಿಸುವುದಾಗಿ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದಂತೆ, ಬನ್ನಿಮರದಹಟ್ಟಿ ಗ್ರಾಮದಲ್ಲಿ ಪ್ರಾಥಮಿಕ ಶಾಲೆಯನ್ನು ಪ್ರಾರಂಭಿಸುವಂತೆ ಕೋರಲಾಗಿತ್ತು. ಈ ಬಗ್ಗೆ ವಿವರವನ್ನು ನೀಡಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಕೋರಿದರು.

ಉಪ ನಿರ್ದೇಶಕರು ಉತ್ತರಿಸುತ್ತಾ, ಹಾಲಿ ½ ಕಿ.ಮೀ ದೂರದಲ್ಲಿ ಪ್ರಾಥಮಿಕ ಶಾಲೆಯಿರುವುದಾಗಿ ಕ್ಷೇತ್ರ ಶಿಕ್ಷಣಾಧಿಕಾರಿಯವರು ವರದಿಯನ್ನು ನೀಡಿರುತ್ತಾರೆ. ಆದ್ದರಿಂದ, 2012-13ನೇ ಸಾಲಿನಲ್ಲಿ ಮಕ್ಕಳ ದಾಖಲಾತಿಯನ್ನು ನೋಡಿಕೊಂಡು ಬನ್ನಿಮರದಹಟ್ಟಿ ಗ್ರಾಮದಲ್ಲಿ ಪ್ರಾಥಮಿಕ ಶಾಲೆಯನ್ನು ಪ್ರಾರಂಭಿಸಲು ಕ್ರಮ ವಹಿಸುವುದಾಗಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಬನ್ನಿಮರದಹಟ್ಟಿ ಗ್ರಾಮಕ್ಕೆ ಖುದ್ದು ಭೇಟಿ ನೀಡಿ ಅಲ್ಲಿಯ ವಾಸ್ತವಾಂಶಗಳನ್ನು

| | | | |
|---|---|---|---|
| | | ಪರಿಶೀಲಿಸಿ ಶಾಲೆಯನ್ನು ಪ್ರಾರಂಭಿಸುವ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ತಿಳಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ ಬೇಲೂರು ತಾಲ್ಲೂಕು ಗೊರನಹಳ್ಳಿಯಲ್ಲಿ ಶಿಕ್ಷಕರು ಶಾಲೆಗೆ ಸರಿಯಾದ ವೇಳೆಗೆ ಬರುತ್ತಿಲ್ಲ. ಆದ್ದರಿಂದ, ಇವರ ಮೇಲೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ರಂಗಸ್ವಾಮಿರವರು ಮಾತನಾಡುತ್ತಾ, ಬಾಗೂರು, ಕಾರೇಹಳ್ಳಿ ಗ್ರಾಮದ ಪ್ರೌಢಶಾಲೆಯಲ್ಲಿ ಗಣಿತ ಮತ್ತು ವಿಜ್ಞಾನ ವಿಷಯಗಳಿಗೆ ಶಿಕ್ಷಕರುಗಳು ಇರುವುದಿಲ್ಲ. ಪರೀಕ್ಷಾ ಸಮಯ ಹತ್ತಿರ ಬರುತ್ತಿದೆ. ಆದ್ದರಿಂದ ಗಣಿತ ಮತ್ತು ವಿಜ್ಞಾನ ವಿಷಯಗಳಿಗೆ ಶಿಕ್ಷಕರುಗಳನ್ನು ನಿಯೋಜನೆಗೊಳಿಸಿ ಮಕ್ಕಳಿಗೆ ಪಾಠಪ್ರವಚನ ಮಾಡಲು ಅನುಕೂಲ ಮಾಡಿಕೊಡಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಮಾನ್ಯ ಸದಸ್ಯರು ಪ್ರಸ್ತಾಪಿಸಿರುವ ವಿಷಯವು ಬಹಳ ಗಂಭೀರವಾಗಿದ್ದು, ಮಕ್ಕಳ ಮುಂದಿನ ಭವಿಷ್ಯದ ಹಿತದೃಷ್ಟಿಯಿಂದ ಆದ್ಯತೆ ಮೇಲೆ ತ್ವರಿತವಾಗಿ ಗಣಿತ ಮತ್ತು ವಿಜ್ಞಾನ ವಿಷಯಗಳಿಗೆ ಶಿಕ್ಷಕರುಗಳನ್ನು ನಿಯೋಜನೆ ಮಾಡಿ ವರದಿ ಮಾಡಬೇಕೆಂದು ಉಪನಿರ್ದೇಶಕರಿಗೆ ಸೂಚಿಸಿದರು.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಒಂದು ವಾರದ ಒಳಗೆ ಶಿಕ್ಷಕರುಗಳನ್ನು ನಿಯೋಜನೆ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, 1ರಿಂದ 10ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿಯೇ ಶಿಕ್ಷಣವನ್ನು ನೀಡುವಂತೆ ಸರ್ಕಾರಕ್ಕೆ ಜಿಲ್ಲಾ ಪಂಚಾಯಿತಿಯಿಂದ ನಿರ್ಣಯವನ್ನು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಇದು ರಾಜ್ಯಮಟ್ಟದ ನಿಯಮಗಳ ವಿಷಯವಾಗಿರುವುದರಿಂದ, ಈ ವಿಷಯದ ಬಗ್ಗೆ ಮಾನ್ಯ ವಿಧಾನ ಸಭಾ ಸದಸ್ಯರು ಮತ್ತು ವಿಧಾನ ಪರಿಷತ್ ಸದಸ್ಯರು ವಿಧಾನಸಭೆ/ವಿಧಾನಪರಿಷತ್ತಿನಲ್ಲಿ ಚರ್ಚಿಸುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ.ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಬೇಲೂರು ತಾಲ್ಲೂಕು ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರು ಇರುವುದಿಲ್ಲ. ಮಹಿಳಾ ವೈದ್ಯರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀಮತಿ ಜಿ.ಟಿ.ಇಂಧಿರಾಧರ್ಮಪ್ಪರವರು ಮಾತನಾಡುತ್ತಾ, ಬೇಲೂರು ತಾಲ್ಲೂಕು ಆಸ್ಪತ್ರೆಯಲ್ಲಿ ಫಾರ್ಮಾಸಿಸ್ಟ್ ಇರುವುದಿಲ್ಲ. ಈ ಬಗ್ಗೆಯೂ ಸಹ ಕ್ರಮ ವಹಿಬೇಕೆಂದು ಕೋರಿದರು.<br>ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಜಿಲ್ಲೆಯಲ್ಲಿ ವೈದ್ಯರ ಕೊರತೆ ಬಹಳ ಇರುತ್ತದೆ. ಗುತ್ತಿಗೆ ಆಧಾರದ ಮೇಲೆ ಎಂ.ಬಿ.ಬಿ.ಎಸ್ ವೈದ್ಯರನ್ನು ನೇಮಕ ಮಾಡಲು ಅನುಮತಿ ನೀಡಿದ್ದು, ಅರ್ಜಿಯನ್ನು ಕರೆಯಲಾಗಿದೆ. ಅರ್ಜಿ ಸಲ್ಲಿಸುವ ಎಲ್ಲಾ ವೈದ್ಯರನ್ನು ತೆಗೆದುಕೊಂಡು ತೀವ್ರ ಅವಶ್ಯಕತೆಯಿರುವ ಆಸ್ಪತ್ರೆಗಳಿಗೆ ವೈದ್ಯರನ್ನು ನೇಮಿಸಲು ಕ್ರಮ ವಹಿಸಲಾಗುವುದು ಮತ್ತು ಫಾರ್ಮಾಸಿಸ್ಟ್ ಗಳನ್ನು ನೇಮಿಸಲು ಕ್ರಮ ವಹಿಸಲಾಗುವುದೆಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜಿ.ಟಿ.ಇಂಧಿರಾಧರ್ಮಪ್ಪರವರು ಮಾತನಾಡುತ್ತಾ, ಯಮಸಂಧಿ ಮುಳುಗಡೆ ಪ್ರದೇಶವೆಂದು ಘೋಷಿಸಿದ ನಂತರ ಯಮಸಂಧಿಯಲ್ಲಿದ್ದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹನಿಕೆ ಗ್ರಾಮಕ್ಕೆ ಸ್ಥಳಾಂತರ ಮಾಡಲಾಗಿದೆ. ಯಮಸಂಧಿ ಮತ್ತು ಇದರ ಸುತ್ತಮುತ್ತಲಿನ ಗ್ರಾಮಗಳ ಜನರು ಯಾವುದೇ ದೃಡೀಕರಣ ಪತ್ರ ಮತ್ತು ಚಿಕಿತ್ಸೆಗಾಗಲಿ ಹನಿಕೆ ಗ್ರಾಮಕ್ಕೆ ಬರಬೇಕಾದಲ್ಲಿ 2 ಬಸ್ ಗಳನ್ನು ಹಿಡಿದು ಬರಬೇಕಾಗಿರುತ್ತದೆ. ಆದ್ದರಿಂದ ಹನಿಕೆ ಗ್ರಾಮಕ್ಕೆ ಸ್ಥಳಾಂತರ ಮಾಡಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಗೆಂಡೆಹಳ್ಳಿಗೆ ಬದಲಾವಣೆ ಮಾಡಿದಲ್ಲಿ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಅಲ್ಲದೆ ಗೆಂಡೆಹಳ್ಳಿ ಮತ್ತು ಸುತ್ತ ಮುತ್ತಲಿನ ಗ್ರಾಮಗಳ ಸಾರ್ವಜನಿಕರಿಗೆ ಹನಿಕೆ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಿದಲ್ಲಿ ಅನುಕೂಲವಾಗುತ್ತದೆ. ಆದ್ದರಿಂದ ಸಾರ್ವಜನಿಕರಿಗೆ ಅನುಕೂಲ ವಾಗುವ ರೀತಿಯಲ್ಲಿ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಮಾನ್ಯ ಸದಸ್ಯರು ಕೋರಿರುವಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬದಲಾವಣೆ ಮಾಡಲು ಕ್ರಮ ವಹಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.<br>ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಸ್ಟಾಫ್ ನರ್ಸ್ ಗಳನ್ನು ನೇಮಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು ಮತ್ತು ದಿಡಗ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಇಲಾಖೆಯ ವಶಕ್ಕೆ ನೀಡಿರುವುದಿಲ್ಲ. ಈ ಬಗ್ಗೆ ಸಂಬಂಧಪಟ್ಟವರಿಗೆ ಕಟ್ಟಡವನ್ನು ಇಲಾಖೆಯ ವಶಕ್ಕೆ ನೀಡಲು ತಿಳಿಸ ಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚನ್ನರಾಯಪಟ್ಟಣ ಇವರಿಗೆ ದಿಡಗ ಆಸ್ಪತ್ರೆ ಕಟ್ಟಡವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರ ವಶಕ್ಕೆ ನೀಡಲು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು. | |

h

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಬಿ.ಎನ್.ರಾಮಚಂದ್ರ (ಬೈರಮುಡಿ ಚಂದ್ರು)ರವರು ಮಾತನಾಡುತ್ತಾ, ಸಕಲೇಶಪುರ ಕ್ರಾಫರ್ಡ್ ಆಸ್ಪತ್ರೆಯಲ್ಲಿ ವೈದ್ಯರು ಇರುವುದಿಲ್ಲ ಮತ್ತು ಸ್ವಚ್ಚತೆಯಿರುವುದಿಲ್ಲ. ರೋಗಿಗಳು ಚಿಕಿತ್ಸೆಗಾಗಿ ಆಸ್ಪತ್ರೆಗೆ ಹೋದಲ್ಲಿ ಹಾಸನಕ್ಕೆ ಹೋಗಬೇಕೆಂದು ಕಳುಹಿಸುತ್ತಾರೆ. ಸ್ಟಾಫ್ ನರ್ಸ್ ಇರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಸಕಲೇಶಪುರ ಕ್ರಾಫರ್ಡ್ ಆಸ್ಪತ್ರೆಗೆ ಭೇಟಿ ನೀಡಿ ಆಸ್ಪತ್ರೆ ಸ್ವಚ್ಚತೆ ಬಗ್ಗೆ ಮೆಮೊ ನೀಡಲಾಗಿದೆ. ಮತ್ತೊಮ್ಮೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾ: ರಾಯರಕೊಪ್ಪಲು ಮಗ್ಗೆ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವು ಶಿಥಿಲಾವಸ್ಥೆಯಲ್ಲಿದ್ದು, ಇದನ್ನು ಸುಮಾರು 100 ವರ್ಷಗಳ ಹಿಂದೆ ನಿರ್ಮಿಸಲಾಗಿದೆ. ಹೊಸ ಕಟ್ಟಡ ನಿರ್ಮಾಣಕ್ಕೆ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಅರೇಹಳ್ಳಿ ಮತ್ತು ಜಾವಗಲ್ ಆರೋಗ್ಯ ಕೇಂದ್ರಗಳಲ್ಲಿ ಶವಾಗಾರಗಳನ್ನು ನಿರ್ಮಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ಡಿ.ಎಂ.ಕುರ್ಕೆಯಲ್ಲಿ ಸ್ಟಾಫ್ ನರ್ಸ್ ಇರುವುದಿಲ್ಲ. ಸ್ಟಾಫ್ ನರ್ಸ್ ನೇಮಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರಾದ ಶ್ರೀ ಸಂತೋಷ್ ಗೌಡರವರು ಮಾತನಾಡುತ್ತಾ, ಅರಕಲಗೂಡು ತಾ: ಬೆಳವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರಾದ ಶ್ರೀ ಲೋಕೇಶ್ ರವರು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲ. ಈ ಬಗ್ಗೆ ಸಾರ್ವಜನಿಕರು ಲಿಖಿತವಾಗಿ ದೂರು ನೀಡಿರುತ್ತಾರೆ. ಆದ್ದರಿಂದ, ಸದರಿ ವೈದ್ಯರನ್ನು ಬದಲಾವಣೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಇನ್ನು ಒಂದು ವಾರದ ಒಳಗಾಗಿ ಮಾನ್ಯ ಅಧ್ಯಕ್ಷರೊಂದಿಗೆ ಬೆಳವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವೈದ್ಯರ ಬದಲಾವಣೆಗೆ ಅಗತ್ಯ ಕ್ರಮ ವಹಿಸುವುದಾಗಿ ತಿಳಿಸಿರು. | |
| 4 | ದಿನಾಂಕ: 06-01-2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿ ಗಳನ್ನು ಅನುಮೋದಿಸುವ ವಿಚಾರ | ದಿನಾಂಕ: 06-01-2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಉಪಾಧ್ಯಕ್ಷರಾದ ಶ್ರೀಮತಿ ಸುಲೋಚನಾ ರಾಮಕೃಷ್ಣರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಹೊಸ ಕಟ್ಟಡಗಳು ಮಂಜೂರಾಗಿರುವಂತಹ | |

7

| | | | |
|---|---|---|---|
| | | ಶಾಲೆಗಳಲ್ಲಿನ ಶಿಥಿಲಗೊಂಡಿರುವ ಶಾಲಾ ಕೊಠಡಿಗಳನ್ನು ನೆಲಸಮಗೊಳಿಸುವುದು ಸೂಕ್ತವಾಗಿರುತ್ತದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಶಿಥಿಲಗೊಂಡಿರುವಂತಹ ಶಾಲಾ ಕೊಠಡಿಗಳನ್ನು ನೆಲಸಮಗೊಳಿಸುವ ಮುಂಚಿತವಾಗಿ ಸದರಿ ಆಸ್ತಿಯು ಶಿಕ್ಷಣ ಇಲಾಖೆಯ ಖಾತೆ ಆಗಿದೆಯೇ ಎಂಬ ಬಗ್ಗೆ ಖಾತರಿಪಡಿಸಿಕೊಂಡು ನಂತರ ನೆಲಸಮಗೊಳಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಶಾಲಾ ಕಟ್ಟಡವಿರುವ ಜಾಗವನ್ನು ಇಲಾಖೆಯ ಖಾತೆಗೆ ಮಾಡಿಸಿಕೊಳ್ಳಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ತಿಳಿಸಿದರು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಉತ್ತರಿಸುತ್ತಾ, ಹಿಂದಿನ ಸಭೆಯಲ್ಲಿ ಸೂಚಿಸಿದಂತೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ವರದಿ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರ ತಾಂತ್ರಿಕ ಅನುಮೋದನೆಯೊಂದಿಗೆ ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸಲು ಜಿಲ್ಲಾ ಪಂಚಾಯಿತಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಕೆಲವು ಶಾಲೆಗಳ ಕಟ್ಟಡಗಳು ಉತ್ತಮ ಸ್ಥಿತಿಯಲ್ಲಿದ್ದರೂ ಸಹ ಹೊಸ ಕಟ್ಟಡಗಳು ಮಂಜೂರಾದ ಹಿನ್ನೆಲೆಯಲ್ಲಿ ಹೊಸ ಕಟ್ಟಡಗಳಿಗೆ ಶಾಲೆಯನ್ನು ವರ್ಗಾಯಿಸಿ ಹಳೆಯ ಕಟ್ಟಡಗಳನ್ನು ಬೀಗ ಹಾಕಲಾಗಿದೆ. ಅವುಗಳ ಸಮರ್ಪಕ ನಿರ್ವಹಣೆ ಇಲ್ಲದೆ ಬೀಳುವ ಸ್ಥಿತಿಗೆ ಬಂದಿವೆ. ಆದ್ದರಿಂದ, ಅಂತಹ ಶಾಲಾ ಕಟ್ಟಡಗಳನ್ನು ಬೇರೆಯವರಿಗೆ ನೀಡಿದಲ್ಲಿ ಅವುಗಳ ನಿರ್ವಹಣೆಗೆ ಅನುಕೂಲವಾಗುತ್ತದೆ ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಖಾಲಿಯಿರುವ ಶಾಲಾ ಕಟ್ಟಡ/ ಇತರೆ ಇಲಾಖೆಗಳ ಕಟ್ಟಡಗಳನ್ನು ಗ್ರಾಮ ಪಂಚಾಯಿತಿ ವಶಕ್ಕೆ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಖಾಲಿಯಿರುವ ಕಟ್ಟಡಗಳನ್ನು ಉತ್ತಮವಾಗಿ ನಿರ್ವಹಣೆ ಮಾಡಿಕೊಳ್ಳುವ ಷರತ್ತಿನೊಂದಿಗೆ ಸ್ತ್ರೀ ಶಕ್ತಿ ಸಂಘ, ಹಾಲು ಉತ್ಪಾದಕರ ಸಂಘ ಅಥವಾ ಇತರೆ ಸಂಘಗಳಿಗೆ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. | |
| 5 | ದಿನಾಂಕ: 30-12-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿ | ದಿನಾಂಕ: 30-12-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ.ಎಂ.ಕೆ.ದ್ಯಾವಯ್ಯ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಮಾತನಾಡುತ್ತಾ, ಡಿ ದೇವರಾಜು ಅರಸು ಹಿಂದುಳಿದ | ಸಭೆಯಲ್ಲಿ ಚರ್ಚಿಸಿದಂತೆ, ಗಂಗಾ ಕಲ್ಯಾಣ ಯೋಜನೆಯಡಿ ಜಿಲ್ಲಾ ಪಂಚಾಯಿತಿ ರಾಜಾ ರಿಗ್ ಸರ್ವಿಸ್, ಚನ್ನರಾಯಪಟ್ಟಣ ಇವರು ಗಂಗಾ |

5

| | | | |
|---|---|---|---|
| | ಸುವ ಬಗ್ಗೆ | ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನ ಮಾಡಿರುವ ಗಂಗಾ ಕಲ್ಯಾಣ ಮತ್ತು ವೈಯಕ್ತಿಕ ಕೊಳವೆ ಬಾವಿಯ ಯೋಜನೆಯಡಿಯಲ್ಲಿ ರಾಜಾ ರಿಗ್ ಸರ್ವಿಸ್ ಚನ್ನರಾಯಪಟ್ಟಣ ಇವರು ಸಮರ್ಪಕವಾಗಿ ಕೊಳವೆ ಬಾವಿಗಳನ್ನು ಕೊರೆದಿರುವುದಿಲ್ಲ ಮತ್ತು ಕಡಿಮೆ ಆಳ ಕೊರೆದು ಹೆಚ್ಚು ಆಳ ಕೊರೆದಿರುವುದಾಗಿ ತಿಳಿಸಿ ಅವ್ಯವಹಾರ ನಡೆಸಿರುತ್ತಾರೆ. ಆದ್ದರಿಂದ, ರಾಜಾ ರಿಗ್ ಸರ್ವಿಸ್ ಇವರನ್ನು ಕಪ್ಪು ಪಟ್ಟಿಯಲ್ಲಿ ಇಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. | ಕಲ್ಯಾಣ ಯೋಜನೆಯಡಿ ಸಮರ್ಪಕವಾಗಿ ಕೊಳವೆ ಬಾವಿಗಳನ್ನು ಕೊರೆಯದಿರುವ ಹಿನ್ನೆಲೆಯಲ್ಲಿ ಇವರನ್ನು ಕಪ್ಪು ಪಟ್ಟಿಯಲ್ಲಿ ಇಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿತು.<br>ಹಾಗೂ ಸಮಗ್ರ ಚರ್ಚೆಯ ನಂತರ ದಿ:30-12-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಿತು. |
| 6 | ದಿನಾಂಕ: 07-01-2012ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 07-01-2012ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಕೃಷಿ ಇಲಾಖೆಯ ವತಿಯಿಂದ ರೈತರಿಗೆ ನೀಡುವ ಪೈಪ್ ಗಳು ಉತ್ತಮ ಗುಣಮಟ್ಟದ್ದಾಗಿರುವುದಿಲ್ಲವೆಂದು ಮತ್ತು ರಿಯಾಯಿತಿ ದರವನ್ನು ಹೊರತುಪಡಿಸಿಯೂ ಮಾರುಕಟ್ಟೆಯಲ್ಲಿ ಕಡಿಮೆ ಬೆಲೆಗೆ ಪೈಪ್ ಗಳು ದೊರೆಯುತ್ತಿವೆಯೆಂದು ರೈತರು ತಿಳಿಸಿರುತ್ತಾರೆ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಜಂಟಿ ಕೃಷಿ ನಿರ್ದೇಶಕರು ಮಾತನಾಡುತ್ತಾ, ರಾಜ್ಯಮಟ್ಟದಲ್ಲಿ ಪೈಪ್ ಗಳ ಬಗ್ಗೆ ಟೆಂಡರ್ ಕರೆದಿದ್ದು, ಒಟ್ಟು 10 ಸಂಸ್ಥೆಗಳ ದರವನ್ನು ಅಂಗೀಕರಿಸಿದ್ದು, ಸದರಿ 10 ಸಂಸ್ಥೆಗಳಲ್ಲಿ ಪೈಪ್ ಖರೀದಿಸಿದಲ್ಲಿ ರಿಯಾಯಿತಿಯನ್ನು ನೀಡಲಾಗುತ್ತದೆ. ಪೈಪ್ ಗಳನ್ನು ಯಾವ ಸಂಸ್ಥೆಯಲ್ಲಿ ಖರೀದಿಸಲಾಗಿದೆ ಎಂಬ ಬಗ್ಗೆ ನಿಖರವಾದ ಮಾಹಿತಿಯನ್ನು ನೀಡಿದಲ್ಲಿ ಪರಿಶೀಲನೆ ನಡೆಸುವುದಾಗಿ ಸಭೆಗೆ ವಿವರ ನೀಡಿದರು. | ಸಮಗ್ರವಾಗಿ ಚರ್ಚಿಸಿದ ನಂತರ ದಿ:07-01-2012ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನು ಮತದಿಂದ ಅನುಮೋದಿಸಿತು. |

೨

| | | | |
|---|---|---|---|
| | | ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಯೋಜನೆಗಳಡಿಯಲ್ಲಿ ಸಾಧನ ಸಲಕರಣೆಗಳು, ಔಷಧಿಗಳು ಮುಂತಾದವುಗಳನ್ನು ಸ್ಥಳೀಯ ಅವಶ್ಯಕತೆಗನುಗುಣವಾಗಿ ಜಿಲ್ಲಾ ಪಂಚಾಯಿತಿಯಿಂದಲೇ ಟೆಂಡರ್ ಕರೆದು ಖರೀದಿಸಲಾಗುತ್ತಿತ್ತು. ಆದರೆ, ಈಗ ರಾಜ್ಯ ಮಟ್ಟದಲ್ಲಿ ಟೆಂಡರ್ ಕರೆಯುತ್ತಿರುವುದರಿಂದ, ಸ್ಥಳೀಯವಾಗಿ ಬೇಕಾಗಿರುವ ಸಾಧನ/ಸಲಕರಣೆ/ಔಷಧಿಗಳು ಲಭ್ಯವಾಗುತ್ತಿಲ್ಲ. ಆದ್ದರಿಂದ, ಈ ಬಗ್ಗೆ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯಲ್ಲಿ ನಿರ್ಣಯವನ್ನು ಮಾಡಲಾಗಿದ್ದು, ಸಾಮಾನ್ಯ ಸಭೆಯಲ್ಲಿಯೂ ಸಹ ನಿರ್ಣಯವನ್ನು ಮಾಡಿ ಸರ್ಕಾರಕ್ಕೆ ಕಳುಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ವತಿಯಿಂದಲೇ ಅವಶ್ಯಕ ಸಾಧನ/ಸಲಕರಣೆ /ಔಷಧಿಗಳನ್ನು ಸ್ಥಳೀಯ ಅವಶ್ಯಕತೆಗನುಗುಣವಾಗಿ ಖರೀದಿಸಲು ಅನುಮತಿ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸುವಂತೆ ತಿಳಿಸಿದರು.<br>ಮಾನ್ಯ ತಾಲ್ಲೂಕು ಪಂಚಾಯತ್ ಅಧ್ಯಕ್ಷರಾದ ಶ್ರೀ ಸಂತೋಷ್ ಗೌಡರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸಾವಯವ ಕೃಷಿ ಮಿಷನ್ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದ್ದು, ಈ ಬಗ್ಗೆ ಪೂರ್ಣ ವಿವರಗಳನ್ನು ನೀಡಬೇಕೆಂದು ಕೋರಿದರು.<br>ಜಂಟಿ ನಿರ್ದೇಶಕರು ಮಾತನಾಡುತ್ತಾ, ಪ್ರತಿ ತಾಲ್ಲೂಕಿನಲ್ಲಿ 300 ಸದಸ್ಯರನ್ನು ಒಳಗೊಂಡಂತೆ ಒಂದು ಸಾವಯವ ಕೃಷಿ ಮಿಷನ್ ಟ್ರಸ್ಟ್ ರಚಿಸಿಕೊಂಡಿದ್ದು, ಸರ್ಕಾರದಿಂದ ಬಿಡುಗಡೆಯಾಗುವ ಅನುದಾನವನ್ನು ಸಾವಯವ ಕೃಷಿ ಮಿಷನ್ ಟ್ರಸ್ಟ್ ಗೆ ಕೃಷಿ ಇಲಾಖೆಯಿಂದ ಮರು ಬಿಡುಗಡೆ ಮಾಡಲಾಗುವುದು. ಟ್ರಸ್ಟಿನಲ್ಲಿ ಹಣವನ್ನು ವಿನಿಯೋಗ ಮಾಡಿರುವ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಸಾವಯವ ಮಿಷನ್ ಟ್ರಸ್ಟ್ ನಲ್ಲಿ ಪರಿಶೀಲನೆ ಮಾಡುವ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರನ್ನು ಕರೆಯಲು ಕ್ರಮ ವಹಿಸುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಮಾತನಾಡುತ್ತಾ, ಸಕಲೇಶಪುರ ತಾ: ಬಾಗೆ ನರ್ಸರಿಯಲ್ಲಿ ಸಾಮಾಜಿಕ ಅರಣ್ಯ ವಿಭಾಗದ ವತಿಯಿಂದ ಬೆಳೆದಿರುವ ಅಡಿಕೆ ಸಸಿಗಳಲ್ಲಿ ಸುಮಾರು 38000 ಸಸಿಗಳನ್ನು ವಿತರಣೆ ಮಾಡಿರುವುದಿಲ್ಲ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀರಂಗಸ್ವಾಮಿರವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗದ ನರ್ಸರಿಗಳಲ್ಲಿ ಬೆಳೆಸಿರುವ ಸಸಿಗಳು ತುಂಬಾ ಚಿಕ್ಕದಾಗಿರುವುದರಿಂದ, ಸಸಿಗಳು ಉಳಿಯುವುದಿಲ್ಲ. ಆದ್ದರಿಂದ, ದೊಡ್ಡ ಅಳತೆಯ ಸಸಿಗಳನ್ನು ನೀಡಲು ಕ್ರಮ ವಹಿಸಬೇಕೆಂದು ಕೋರಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸಿಲ್ವರ್, ತೇಗ, ಹೊಂಗೆ ಸಸಿಗಳನ್ನು ವಿತರಣೆ ಮಾಡುತ್ತಿದ್ದಾರೆ. ರೈತರಿಗೆ ಬೇರೆ ಬೇರೆ ಜಾತಿಯ ಮರಗಳನ್ನು ನೀಡಿದಲ್ಲಿ ಹೆಚ್ಚಿನ ಅನುಕೂಲವಾಗುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಗ್ರಾಮೀಣ ಪ್ರದೇಶಗಳಲ್ಲಿ ಎಲ್ಲರೂ ತೇಗದ ಮರದಿಂದಲೇ ಮನೆಗಳನ್ನು ಕಟ್ಟುವುದು ಸಾಧ್ಯವಾಗುವುದಿಲ್ಲ. ಮತ್ತಿ, ನೇರಳೆ, ಹೊನ್ನೆ, ಹೆಬ್ಬೇವು, ಬೇವು ಕೂಳಿ,ನಂದಿ ಮುಂತಾದ ಮರಗಳ ಸಸಿಗಳನ್ನು ಬೆಳೆಸಿ ರೈತರಿಗೆ ನೀಡಲು ಕ್ರಮ ವಹಿಸುವಂತೆ ಮತ್ತು 8*12 ಅಳತೆಯ ಸಸಿಗಳನ್ನು ವಿತರಣೆ ಮಾಡಲು ಕ್ರಮ ವಹಿಸುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಮಾತನಾಡುತ್ತಾ, ರಾಷ್ಟ್ರೀಕೃತ ಬ್ಯಾಂಕುಗಳಿಂದ ರೈತರಿಗೆ ಸಾಲವನ್ನು ವಿತರಣೆ ಮಾಡುತ್ತಿಲ್ಲ. ಈ ಬಗ್ಗೆ ಲೀಡ್ ಬ್ಯಾಂಕ್ ಅಧಿಕಾರಿಗಳ ಸಭೆಯಲ್ಲಿ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿಲ್ಲೆಗೆ ಆರ್.ಬಿ.ಐ.ಅಧಿಕಾರಿಗಳು ಭೇಟಿ ನೀಡಿದ ಸಂದರ್ಭದಲ್ಲಿ ಅವರೊಂದಿಗೆ ರೈತರಿಗೆ ಸಮರ್ಪಕವಾಗಿ ಸಾಲವನ್ನು ನೀಡುವ ಬಗ್ಗೆ ಆರ್.ಬಿ.ಐ ವತಿಯಿಂದ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಲಾಗಿದೆ. ಅಧಿಕಾರಿಗಳು ಈ ಬಗ್ಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿರುತ್ತಾರೆಂದು ಸಭೆಯ ಗಮನಕ್ಕೆ ತಂದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ರಾಷ್ಟ್ರೀಕೃತ ಬ್ಯಾಂಕುಗಳಿಂದ ರೈತರಿಗೆ ಸಾಲವನ್ನು ಆರ್.ಬಿ.ಐ ಅಧಿಕಾರಿಯವರೊಂದಿಗೆ ಸಮಗ್ರವಾಗಿ ಚರ್ಚಿಸಲಾಗಿದೆ. ಮತ್ತು ಬರಪೀಡಿತ ತಾಲ್ಲೂಕುಗಳಲ್ಲಿ ಅಲ್ಪಾವಧಿ ಸಾಲವನ್ನು ಮಧ್ಯಮಾವಧಿ ಸಾಲವನ್ನಾಗಿ, ಮಧ್ಯಮಾವಧಿ ಸಾಲವನ್ನು ಧೀರ್ಘಾವಧಿ ಸಾಲವನ್ನಾಗಿ ಮಾರ್ಪಾಡು ಮಾಡಬೇಕೆಂದು ಕೋರಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು. | |
| 7 | ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುವ ಜಿಲ್ಲಾ ಪಂಚಾಯಿತಿ ಕಾಮಗಾರಿಗಳ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಬೆಂಗಳೂರಿನಿಂದ ಮಂಗಳೂರಿನವರೆಗೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಕಾಮಗಾರಿಯ ಮಧ್ಯದಲ್ಲಿ ಕೆಲವು ಆಸ್ಪತ್ರೆ ಕಟ್ಟಡಗಳು ಮತ್ತು ಶಾಲಾ ಕಟ್ಟಡಗಳಿದ್ದು, ಅವುಗಳನ್ನು ಹೊಸದಾಗಿ ನಿರ್ಮಾಣ ಮಾಡಬೇಕಾಗಿದ್ದು, ಇವುಗಳಿಗೆ ಸಂಬಂಧಿಸಿದಂತೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಪರಿಹಾರ ಧನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಬಿಡುಗಡೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಬೆಂಗಳೂರಿನಿಂದ ಮಂಗಳೂರಿನ ವರೆಗೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಮಧ್ಯದಲ್ಲಿ ಬರುವ ಜಿಲ್ಲಾ ಪಂಚಾಯಿತಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಹೊಸ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸರ್ಕಾರ ದಿಂದ ಬಿಡುಗಡೆಯಾಗುವ ಅನುದಾನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಜಮೆ ಮಾಡುವಂತೆ |

| | | | |
|---|---|---|---|
| | | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ಮಟ್ಟನವಿಲೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹಣ ಜಮೆ ಆಗಿರುವುದಿಲ್ಲವೆಂದು ಸಭೆಗೆ ತಿಳಿಸಿದರು. | ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 8 | ಜಿಲ್ಲಾ ಪಂಚಾಯತ್ ವಿಭಾಗದ ಟೆಂಡರ್ ಮೊತ್ತದಲ್ಲಿ ಉಳಿ ತಾಯವಾಗುವ ಹಣವನ್ನು ಖರ್ಚು ಮಾಡುವ ಬಗ್ಗೆ ಚರ್ಚಿಸಲು ಅಧೀಕ್ಷಕ ಅಭಿಯಂತರರನ್ನು ಕರೆಸುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಲ್ಲಿ ಜಿಲ್ಲಾ ಪಂಚಾಯತ್ ವಿಭಾಗದ ಟೆಂಡರ್ ಮೊತ್ತದಲ್ಲಿ ಉಳಿತಾಯವಾಗುವ ಹಣದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಲ್ಲಿ ಜಿಲ್ಲಾ ಪಂಚಾಯತ್ ವಿಭಾಗದ ಟೆಂಡರ್ ಮೊತ್ತದಲ್ಲಿ ಉಳಿತಾಯವಾಗುವ ಹಣದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ ಅಧೀಕ್ಷಕ ಅಭಿಯಂತರರೊಂದಿಗೆ ಚರ್ಚಿಸಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಲ್ಲಿ ಜಿಲ್ಲಾ ಪಂಚಾಯತ್ ವಿಭಾಗದ ಟೆಂಡರ್ ಮೊತ್ತದಲ್ಲಿ ಉಳಿತಾಯವಾಗುವ ಹಣದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ ಅಧೀಕ್ಷಕ ಅಭಿಯಂತರರೊಂದಿಗೆ ಚರ್ಚಿಸಿ ಕ್ರಮ ವಹಿಸಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |
| 9 | ದರಖಾಸ್ತು ಜಮೀನನ್ನು ದುರಸ್ಥಿ ಮಾಡುವಾಗ ವಿಳಂಬವಾಗುತ್ತಿರುವ ಬಗ್ಗೆ ಹಾಗು ವಾಸಸ್ಥಳ ದೃಡೀಕರಣ ಪಡೆಯುವಾಗ ಆಗುವ ತೊಂದರೆ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಕಂದಾಯ ಇಲಾಖೆಯ ವತಿಯಿಂದ ದರಖಾಸ್ತು ಜಮೀನನ್ನು ದುರಸ್ಥಿಗೊಳಿಸುವ ಕಾರ್ಯವನ್ನು ಕೈಗೆತ್ತಿಕೊಂಡಿದ್ದು, ವೈಯಕ್ತಿಕವಾಗಿ ದುರಸ್ಥಿಗೊಳಿಸಿಕೊಡದೆ ಸಾಮೂಹಿಕವಾಗಿ ಅಂದರೆ, ಹೋಬಳಿವಾರು ಎಲ್ಲಾ ದರಖಾಸ್ತು ಜಮೀನನ್ನು ದುರಸ್ಥಿಗೊಳಿಸುತ್ತಿದ್ದಾರೆ. ಇದರಿಂದ ವೈಯಕ್ತಿಕವಾಗಿ ಸಾರ್ವಜನಿಕರಿಗೆ ಅನುಕೂಲವಾಗುತ್ತಿಲ್ಲ. ಆದ್ದರಿಂದ, ಏಕವ್ಯಕ್ತಿ ಅರ್ಜಿ ಸಲ್ಲಿಸಿದಲ್ಲಿ ದರಖಾಸ್ತು ಜಮೀನನ್ನು ದುರಸ್ಥಿಗೊಳಿಸಿಕೊಡುವಂತೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು ಮತ್ತು ವಾಸಸ್ಥಳ ದೃಡೀಕರಣವನ್ನು ನೆಮ್ಮದಿ ಕೇಂದ್ರದಿಂದ ಪಡೆಯಬೇಕೆಂದು ಸರ್ಕಾರ ಆದೇಶ ಮಾಡಿದ್ದು, ಇದರಿಂದ, ವಾಸಸ್ಥಳ ದೃಡೀಕರಣ ಪತ್ರವನ್ನು ಪಡೆಯಲು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದೆ. ಆದ್ದರಿಂದ, ಹಿಂದೆ ಇದ್ದಂತೆಯೇ ಗ್ರಾಮ ಪಂಚಾಯಿತಿ ವತಿಯಿಂದಲೇ ವಾಸಸ್ಥಳ ದೃಡೀಕರಣ ಪತ್ರವನ್ನು ಪಡೆಯುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಕಂದಾಯ ಇಲಾಖೆಯಲ್ಲಿ ದರಖಾಸ್ತು ಜಮೀನನ್ನು ಮಾನ್ಯ ಜಿಲ್ಲಾಧಿಕಾರಿಯವರ ವಿಶೇಷ ಅನುಮತಿ ಮೇಲೆ | ಸಭೆಯಲ್ಲಿ ಚರ್ಚಿಸಿದಂತೆ ವಾಸಸ್ಥಳ ದೃಡೀಕರಣ ಪತ್ರವನ್ನು ಗ್ರಾಮ ಪಂಚಾಯಿತಿ ವತಿಯಿಂದಲೇ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | | ಏಕವ್ಯಕ್ತಿ ಅರ್ಜಿಯ ಮೇಲೆ ದುರಸ್ಥಿಗೊಳಿಸಿಕೊಡಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು. | |
| 10 | ಹಾಸನ ಜಿಲ್ಲೆಯ ಹಾಸನ, ಬೇಲೂರು, ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಅರಸೀಕೆರೆ ತಾಲ್ಲೂಕುಗಳ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಉನ್ನತೀಕರಿಸುವ ಬಗ್ಗೆ . | ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಹಾಸನ ಜಿಲ್ಲೆಯ ಹಾಸನ, ಬೇಲೂರು, ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಅರಸೀಕೆರೆ ತಾಲ್ಲೂಕುಗಳ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಉನ್ನತೀಕರಿಸುವ ಬಗ್ಗೆ ಸಭೆಯಲ್ಲಿ ಅನುಮೋದನೆ ನೀಡಬೇಕೆಂದು ತಿಳಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಹಾಸನ ಜಿಲ್ಲೆಯ ಹಾಸನ, ಬೇಲೂರು, ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಅರಸೀಕೆರೆ ತಾಲ್ಲೂಕುಗಳ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಉನ್ನತೀಕರಿಸುವ ಬಗ್ಗೆ ಸಭೆಯಲ್ಲಿ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು |
| 11 | ಚಿರತೆ ಹಾವಳಿ ಬಗ್ಗೆ | ಮಾನ್ಯ ಸದಸ್ಯರಾದ, ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅರಕಲಗೂಡು ತಾಲ್ಲೂಕಿನಲ್ಲಿ ಚಿರತೆ ಹಾವಳಿ ಹೆಚ್ಚಾಗಿದೆ. ಅರಣ್ಯ ಇಲಾಖೆ ಕೇವಲ 2 ಬೋನ್ ಗಳನ್ನು ಮಾತ್ರ ಇಟ್ಟಿದೆ. ಅಷ್ಟೇ ಅಲ್ಲದೆ ಬೆರಳೆಣಿಕೆಯಷ್ಟು ಮಂದಿ ಮಾತ್ರ ಸಿಬ್ಬಂದಿ ಇದ್ದಾರೆ. ಇದರಿಂದ ಚಿರತೆಯನ್ನು ಸೆರೆಹಿಡಿಯಲು ಸಾಧ್ಯವಿಲ್ಲ. ತಾಲ್ಲೂಕಿನಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಹಿನ್ನಲೆಯಲ್ಲಿ ಸಂಜೆ ವೇಳೆ ಜನ-ಜಾನುವಾರು ಮನೆ ಬಿಟ್ಟು ಹೊರಗೆ ಬಾರದ ಸ್ಥಿತಿ ನಿರ್ಮಾಣವಾಗಿದೆ. ಈ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಉತ್ತರಿಸುತ್ತಾ, ಜಿಲ್ಲೆಯ 8 ತಾಲ್ಲೂಕುಗಳಿಗೆ ಅರಣ್ಯ ಇಲಾಖೆಯಲ್ಲಿ 5 ಬೋನುಗಳು ಮಾತ್ರ ಲಭ್ಯವಿದೆ. ಚಿರತೆ ಹಾವಳಿ ಇರುವ ತಾಲ್ಲೂಕುಗಳಲ್ಲಿ ಎರೆಡೆರಡು ಬೋನುಗಳನ್ನು ಇರಿಸಲಾಗಿದೆ. ಜಿಲ್ಲೆಯ ಅರಕಲಗೂಡು ತಾಲ್ಲೂಕಿನಲ್ಲಿ ಮಾತ್ರ ಚಿರತೆ ಹಾವಳಿ ಹೆಚ್ಚಾಗಿದೆ. ಹೆಚ್ಚುವರಿಯಾಗಿ 5 ಬೋನ್ ಗಳನ್ನು ತೆಗೆದುಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ನೀಡಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿಲ್ಲೆಯಲ್ಲಿ ಬೇರೆ ತಾಲ್ಲೂಕಿಗೆ ಹೋಲಿಸಿದರೆ, ಅರಕಲಗೂಡು ತಾಲ್ಲೂಕಿನಲ್ಲಿ ಚಿರತೆ ಹಾವಳಿ ಹೆಚ್ಚಾಗಿದೆ. ಲಭ್ಯವಿರುವ ಎಲ್ಲಾ ಬೋನುಗಳನ್ನು ತಾತ್ಕಾಲಿಕವಾಗಿ ಅರಕಲಗೂಡು ತಾಲ್ಲೂಕಿಗೆ ಸ್ಥಳಾಂತರಿಸಿ ಚಿರತೆ ಸೆರೆಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ಅರಕಲಗೂಡು ತಾಲ್ಲೂಕಿನಲ್ಲಿರುವ ಚಿರತೆಯನ್ನು ಸೆರೆಹಿಡಿಯಲು ಅಗತ್ಯ ಕ್ರಮ ವಹಿಸುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಇಲಾಖೆರವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 12 | ರಾಜನಶಿರಿಯೂರು ಗ್ರಾಮಕ್ಕೆ ಬಿ.ಸಿ.ಎಂ. ವಿದ್ಯಾರ್ಥಿನಿಲಯ ಮಂಜೂರು ಮಾಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀಮತಿ ಜಯಶೀಲ ಜಯಶಂಕರ್ ರವರು ಬೇಲೂರು ತಾಲ್ಲೂಕು, ರಾಜನಶಿರಿಯೂರು ಗ್ರಾಮದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸಾಕಷ್ಟು ಸಂಖ್ಯೆಯಲ್ಲಿದ್ದು, ಅವರು ಆರ್ಥಿಕವಾಗಿ ಬಹಳ ಹಿಂದುಳಿದಿರುತ್ತಾರೆ. ಆದ್ದರಿಂದ, ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುಕೂಲವಾಗುವಂತೆ ರಾಜನಶಿರಿಯೂರು ಗ್ರಾಮಕ್ಕೆ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಬೇಕೆಂದು ಮನವಿ ಸಲ್ಲಿಸಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ರಾಜನಶಿರಿಯೂರು ಗ್ರಾಮದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುಕೂಲವಾಗುವಂತೆ ರಾಜನ ಶಿರಿಯೂರು ಗ್ರಾಮಕ್ಕೆ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿತು. |
| 13 | ಬೇಲೂರಿನಲ್ಲಿ ಸ್ಟ್ರೈಕರ್ ಕಪ್ - 2012 ನಡೆಸುತ್ತಿದ್ದು, ಜಿಲ್ಲಾ ಪಂಚಾಯಿತಿಯಿಂದ ಆರ್ಥಿಕ ಧನಸಹಾಯ ಕೋರಿರುವ ಬಗ್ಗೆ. | ಪ್ರಧಾನ ಕಾರ್ಯದರ್ಶಿ, ಬೇಲೂರು ವಾಲಿಬಾಲ್ ಸಂಸ್ಥೆ (ರಿ), ಬೇಲೂರು ಇವರು ಮನವಿಯನ್ನು ಸಲ್ಲಿಸಿ ದಿನಾಂಕ: 04-02-2012 ಮತ್ತು 05-02-2012ರಂದು ರಾಜ್ಯಮಟ್ಟದ ಆಹ್ವಾನಿತ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಏರ್ಪಡಿಸಿದ್ದು, ಸದರಿ ಪಂದ್ಯಾವಳಿಯನ್ನು ಯಶಸ್ವಿಯಾಗಿ ನಡೆಸಲು ಜಿಲ್ಲಾ ಪಂಚಾಯಿತಿ ವತಿಯಿಂದ ಆರ್ಥಿಕ ಧನಸಹಾಯವನ್ನು ಮಾಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಪ್ರಧಾನ ಕಾರ್ಯದರ್ಶಿ, ಬೇಲೂರು ವಾಲಿಬಾಲ್ ಸಂಸ್ಥೆ (ರಿ), ಬೇಲೂರು ಇವರು ಕೋರಿರುವಂತೆ ದಿನಾಂಕ: 04-02-2012 ಮತ್ತು 05-02-2012ರಂದು ರಾಜ್ಯಮಟ್ಟದ ಆಹ್ವಾನಿತ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ನಡೆಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 14 | ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ದಿ : 23-02-2012ರಿಂದ 26-02-2012ರವರೆಗೆ ನಡೆಯುವ 33ನೇ ರಾಷ್ಟ್ರೀಯ ಹಿರಿಯ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವ ಹಾಸನ ಜಿಲ್ಲಾ ಹಿರಿಯ ಕ್ರೀಡಾ ಪಟುಗಳಿಗೆ ಕ್ರೀಡಾ ಸಮವಸ್ತ್ರಗಳಿಗೆ ಧನಸಹಾಯ ನೀಡುವ ಬಗ್ಗೆ. | ಕಾರ್ಯದರ್ಶಿ, ಹಾಸನ ಜಿಲ್ಲಾ ಹಿರಿಯರ ಕ್ರೀಡಾ ಸಂಸ್ಥೆ, ಹಾಸನ (ರಿ), ಇವರು ಮನವಿಯನ್ನು ಸಲ್ಲಿಸಿ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ದಿ:23-02-2012ರಿಂದ 26-02-2012ರವರೆಗೆ ನಡೆಯುವ 33ನೇ ರಾಷ್ಟ್ರೀಯ ಹಿರಿಯರ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಹಾಸನ ಜಿಲ್ಲೆಯಲ್ಲಿ 25 ಪುರುಷರು, 8 ಮಹಿಳೆಯರು ಭಾಗವಹಿಸುತ್ತಿದ್ದು, ಸದರಿಯವರಿಗೆ ಪ್ರವೇಶ ಶುಲ್ಕ ಮತ್ತು ಕ್ರೀಡಾ ಸಾಮಗ್ರಿಗಳ ಕಿಟ್ ನೀಡಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ಮಾಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಕಾರ್ಯದರ್ಶಿ, ಹಾಸನ ಜಿಲ್ಲಾ ಹಿರಿಯರ ಕ್ರೀಡಾ ಸಂಸ್ಥೆ, ಹಾಸನ (ರಿ), ಇವರು ಕೋರಿರುವಂತೆ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ದಿ:23-02-2012ರಿಂದ 26-02-2012ರವರೆಗೆ ನಡೆಯುವ 33ನೇ ರಾಷ್ಟ್ರೀಯ ಹಿರಿಯರ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಹಾಸನ ಜಿಲ್ಲೆಯಿಂದ ಭಾಗವಹಿಸುತ್ತಿರುವ 34 ಸ್ಪರ್ಧಿಗಳಿಗೆ ಕ್ರೀಡಾ ಸಮವಸ್ತ್ರಗಳನ್ನು ನೀಡಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 15 | ಗೋವಾದಲ್ಲಿ ನಡೆಯುವ 5ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಲು ಧನ ಸಹಾಯ ನೀಡುವ ಬಗ್ಗೆ. | ಶ್ರೀ ಶಿವಣ್ಣ ಎಸ್. ರಾಜಿಗೆರೆ, ಜನಪದ ಕಲಾವಿದರು, ಗೋಣಿಸೋಮನಹಳ್ಳಿ, ಹಳೇಬೀಡು ಹೋ: ಬೇಲೂರು ತಾ: ಇವರು ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಮನವಿಯನ್ನು ಸಲ್ಲಿಸಿ ಕರ್ನಾಟಕ ಸಂಘ, ವಾಸ್ಕೋ ಇವರು 5ನೇ ಕನ್ನಡ ಸಾಹಿತ್ಯ ಸಮ್ಮೇಳನ ಏರ್ಪಡಿಸಿದ್ದು, ಸದರಿ ಸಮ್ಮೇಳನಕ್ಕೆ ಜನಪದಗೀತಗಾಯನ ತಂಡವಾಗಿ ಆಯ್ಕೆಯಾಗಿದ್ದು, ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಹೋಗಿಬರಲು ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯ ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಶ್ರೀ ಶಿವಣ್ಣ ಎಸ್. ರಾಜಿಗೆರೆ, ಜನಪದ ಕಲಾವಿದರು, ಗೋಣಿಸೋಮನಹಳ್ಳಿ, ಹಳೇಬೀಡು ಹೋ: ಬೇಲೂರು ತಾ: ಇವರು ಕೋರಿರುವಂತೆ ದಿನಾಂಕ: 22-01-2012ರಂದು ಗೋವಾದಲ್ಲಿ ನಡೆದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಭಾಗವಹಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/- (ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 16 | ಹಾಸನ ಜಿಲ್ಲೆಯಲ್ಲಿ ಬರಗಾಲ ಉಂಟಾಗಿರುವ ಹಿನ್ನಲೆಯಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿ ಗಳನ್ನು ಕೈಗೆತ್ತಿಕೊಳ್ಳಲು ಹೆಚ್ಚುವರಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ ರೂ.46.00ಕೋಟಿಗಳು | ಉಪ ಕಾರ್ಯದರ್ಶಿ (ಅಭಿವೃದ್ಧಿ)ರವರು ಮಾತನಾಡುತ್ತಾ, ಹಾಸನ ಜಿಲ್ಲೆಯಲ್ಲಿ ಬರಗಾಲ ಉಂಟಾಗಿರುವ ಹಿನ್ನಲೆಯಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ರೂ.46.00ಕೋಟಿಗಳ ಹೆಚ್ಚುವರಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅರಕಲಗೂಡು ತಾಲ್ಲೂಕಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸಮರ್ಪಕವಾಗಿ ಅನುಷ್ಠಾನ ಮಾಡಿಲ್ಲದ ಹಿನ್ನಲೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಕಾರ್ಯದರ್ಶಿಗಳು ಮತ್ತು ಇತರೆ ಇಲಾಖೆಗಳ ಅಧಿಕಾರಿಗಳನ್ನು ಅಮಾನತ್ತಿನಲ್ಲಿಡಲಾಗಿದ್ದು, ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ನಿರ್ವಹಿಸಲು ಸಿಬ್ಬಂದಿಯವರಿಲ್ಲದೆ ಕೆಲಸಗಳು ಸ್ಥಗಿತಗೊಂಡಿರುತ್ತವೆ. ಆದ್ದರಿಂದ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು/ಕಾರ್ಯದರ್ಶಿಗಳು ಮತ್ತು ಲೈನ್ ಡಿಪಾರ್ಟ್ ಮೆಂಟಿನ ಅಧಿಕಾರಿಗಳು/ಸಿಬ್ಬಂದಿಯವರ ಅಮಾನತ್ತನ್ನು ರದ್ದುಗೊಳಿಸಿ ಪುನರ್ ನೇಮಕ ಮಾಡಬೇಕೆಂದು ಕೋರಿದರು.<br>ಇದಕ್ಕೆ ಇತರೆ ಸದಸ್ಯರುಗಳೂ ಸಹ ತಮ್ಮ ಸಹಮತವನ್ನು ವ್ಯಕ್ತಪಡಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ ಹಾಸನ ಜಿಲ್ಲೆಯಲ್ಲಿ ಬರಗಾಲ ಉಂಟಾಗಿರುವ ಹಿನ್ನಲೆಯಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿ ಗಳನ್ನು ಕೈಗೆತ್ತಿಕೊಳ್ಳಲು ರೂ.46.00ಕೋಟಿ (ರೂಪಾಯಿ ನಲವತ್ತಾರು ಕೋಟಿ ಮಾತ್ರ)ಗಳ ಹೆಚ್ಚುವರಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಿತು. |
| 17 | ಶಿಥಿಲಗೊಂಡಿರುವ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ನೆಲಸಮ ಮಾಡಲು ಅನುಮತಿ ನೀಡುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(5)ಶಿಕ್ಷಣ 17/2010-11 ದಿನಾಂಕ: 22-11-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲೆ, ಚನ್ನರಾಯಪಟ್ಟನ ತಾಲ್ಲೂಕಿನ 9, ಬೇಲೂರು ತಾಲ್ಲೂಕಿನ 4, ಸಕಲೇಶಪುರ ತಾಲ್ಲೂಕಿನ 32 ಒಟ್ಟು 45 ಸರ್ಕಾರಿ ಕಿರಿಯ/ಹಿರಿಯ ಪ್ರಾಥಮಿಕ ಶಾಲಾ ಕಟ್ಟಡಗಳು | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುವಂತೆ, ತುಂಬಾ ಶಿಥಿಲಗೊಂಡಿರುವ ಮತ್ತು ಇಂಜಿನಿಯರಿಂಗ್ ಉಪ ವಿಭಾಗಗಳಿಂದ ಅಭಿಪ್ರಾಯ |

| | | | |
|---|---|---|---|
| | | ಶಿಥಿಲಗೊಂಡಿದ್ದು, ಸದರಿ ಕಟ್ಟಡಗಳಲ್ಲಿ ಶಾಲೆಗಳನ್ನು ನಡೆಸಲು ಸಾಧ್ಯವಾಗುವುದಿಲ್ಲವೆಂದು ಸಂಬಂಧಪಟ್ಟ ಇಂಜಿನಿಯರಿಂಗ್ ಉಪ ವಿಭಾಗಗಳಿಂದ ಅಭಿಪ್ರಾಯ ಪಡೆದು ಶಿಥಿಲಗೊಂಡಿರುವ ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸಲು ಅನುಮತಿ ನೀಡುವಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುತ್ತಾರೆ. | ಪಡೆದಿರುವ ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ 9, ಬೇಲೂರು ತಾಲ್ಲೂಕಿನ 4, ಸಕಲೇಶಪುರ ತಾಲ್ಲೂಕಿನ 32 ಒಟ್ಟು 45 ಸರ್ಕಾರಿ ಕಿರಿಯ/ಹಿರಿಯ ಪ್ರಾಥಮಿಕ ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸಲು ಅನುಮತಿ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| 1 | ಹೊಳೆನರಸೀಪುರ ತಾ: ಹರದನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡ ವನ್ನು ನೆಲಸಮಗೊಳಿಸಲು ಅನುಮತಿ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿರವರು ಮಾತನಾಡುತ್ತಾ, ಹೊಳೆನರಸೀಪುರ ತಾ: ಹರದನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಳೆಯ ಕಟ್ಟಡವು ತುಂಬಾ ಶಿಥಿಲಗೊಂಡಿದ್ದು, ಬೀಳುವ ಸ್ಥಿತಿಯಲ್ಲಿದೆ. ಅಲ್ಲದೆ, ಹೊಸ ಕಟ್ಟಡ ನಿರ್ಮಾಣಗೊಂಡಿದ್ದು, ಶಾಲೆಯನ್ನು ಹೊಸ ಕಟ್ಟಡಕ್ಕೆ ಸ್ಥಳಾಂತರ ಮಾಡಲಾಗಿದೆ. ತಾಲ್ಲೂಕು ಪಂಚಾಯಿತಿಯಲ್ಲಿ ಹಳೆಯ ಕಟ್ಟಡವನ್ನು ನೆಲಸಮಗೊಳಿಸುವ ಬಗ್ಗೆ ನಿರ್ಣಯವನ್ನು ಮಾಡಲಾಗಿದೆ. ಆದ್ದರಿಂದ ಕಟ್ಟಡ ನೆಲಸಮ ಗೊಳಿಸಲು ಜಿಲ್ಲಾ ಪಂಚಾಯಿತಿಯ ಅನುಮತಿ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಹೊಳೆನರಸೀ ಪುರ ತಾ: ಹರದನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಳೆಯ ಕಟ್ಟಡವನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಳೆನರಸೀಪುರ ಇವರ ತಾಂತ್ರಿಕ ಅನುಮೋದನೆಯೊಂದಿಗೆ ನೆಲಸಮಗೊಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿತು. |
| 2 | ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಮಂಜೂ ರಾಗುವ ಶಾಲಾ ಕಟ್ಟಡಗಳನ್ನು ಪಂಚಾಯತ್ ರಾಜ್ ಇಂಜಿನಿ ಯರಿಂಗ್ ವಿಭಾಗಗಳ ಮುಖಾಂತರ ಅನುಷ್ಠಾನ ಗೊಳಿಸಲು ಅನುಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಬೆಂಗಳೂರಿನಲ್ಲಿ ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸದಸ್ಯರುಗಳ ಕಾರ್ಯಾಗಾರದಲ್ಲಿ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಮಂಜೂರಾಗುವ ಶಾಲಾ ಕಟ್ಟಡಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮುಖಾಂತರ ಅನುಷ್ಠಾನ ಮಾಡುವ ಬಗ್ಗೆ ಸಮಗ್ರವಾಗಿ ಚರ್ಚಿಸಿ ನಿರ್ಣಯಿಸಲಾಗಿದೆ.<br>ಈ ಸಂಬಂಧ ಸನ್ಮಾನ್ಯ ಶಿಕ್ಷಣ ಸಚಿವರು ರಾಜ್ಯದ ಎಲ್ಲಾ ಸ್ಥಾಯಿ ಸಮಿತಿ ಸದಸ್ಯರುಗಳು ಜಿಲ್ಲಾ ಪಂಚಾಯಿತಿಯಲ್ಲಿ ನಿರ್ಣಯವನ್ನು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಿರುತ್ತಾರೆ. ಆದ್ದರಿಂದ, ಹಾಸನ ಜಿಲ್ಲಾ ಪಂಚಾಯಿತಿ ವತಿಯಿಂದಲೂ ಸಹ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ ಮಂಜೂರಾಗುವ ಶಾಲಾ ಕಟ್ಟಡಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮುಖಾಂತರ ಅನುಷ್ಠಾನ ಮಾಡಲು ನಿರ್ಣಯವನ್ನು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಮಂಜೂ ರಾಗುವ ಶಾಲಾ ಕಟ್ಟಡಗಳ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮುಖಾಂತರ ಅನುಷ್ಠಾನ ಮಾಡಲು ಅನುಮೋದನೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಬೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | 2012ನೇ ಇಸವಿಯ ಜಿಲ್ಲಾ ಪಂಚಾಯಿತಿ ಎಕ್ಸಿಕ್ಯೂಟಿವ್ ಡೈರಿಗಳನ್ನು ಹೆಚ್ಚುವರಿಯಾಗಿ ಮುದ್ರಿಸಿ ಸರಬರಾಜು ಮಾಡುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, 2012ನೇ ಇಸವಿಯ 300 ಜಿಲ್ಲಾ ಪಂಚಾಯಿತಿ ಎಕ್ಸಿಕ್ಯೂಟಿವ್ ಡೈರಿಗಳನ್ನು ಶ್ರೀ ಜಯಲಕ್ಷ್ಮಿ, ಬುಕ್ ಬೈಂಡರ್ಸ್ ಮತ್ತು ಪ್ರಿಂಟಿಂಗ್, ಸ್ಟೇಷನರಿ, ಹಾಸನ ಇವರು ಸರಬರಾಜು ಮಾಡಿರುತ್ತಾರೆ. ಸದರಿ ಡೈರಿಗಳನ್ನು ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ವಿತರಣೆ ಮಾಡಲಾಗಿದೆ. ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳ ಅಪೇಕ್ಷೆಯಂತೆ 300 ಎಕ್ಸಿಕ್ಯೂಟಿವ್ ಡೈರಿಗಳನ್ನು ಶ್ರೀ ಜಯಲಕ್ಷ್ಮಿ, ಬುಕ್ ಬೈಂಡರ್ಸ್ ಮತ್ತು ಪ್ರಿಂಟಿಂಗ್, ಸ್ಟೇಷನರಿ, ಹಾಸನ ಇವರಿಂದ ಹಿಂದಿನ ದರದಲ್ಲಿಯೇ ಮುದ್ರಿಸಿ ಸರಬರಾಜು ಮಾಡುವ ಬಗ್ಗೆ ಅನುಮತಿ ನೀಡುವಂತೆ ಸಭೆಯ ನಿರ್ಣಯಕ್ಕೆ ವಿಷಯವನ್ನು ಮಂಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2012ನೇ ಇಸವಿಯ ಜಿಲ್ಲಾ ಪಂಚಾಯಿತಿಯ 300 ಹೆಚ್ಚುವರಿ ಎಕ್ಸಿಕ್ಯೂಟಿವ್ ಡೈರಿಗಳನ್ನು ಹಿಂದಿನ ದರದಲ್ಲಿಯೇ ಶ್ರೀ ಜಯಲಕ್ಷ್ಮಿ ಬುಕ್ ಬೈಂಡರ್ಸ್ ಮತ್ತು ಪ್ರಿಂಟಿಂಗ್, ಸ್ಟೇಷನರಿ, ಹಾಸನ ಇವರಿಂದ ರೂ.88500/--(ರೂಪಾಯಿ ಎಂಬತ್ತೆಂಟು ಸಾವಿರದ ಐದು ನೂರು ಮಾತ್ರ)ಗಳಲ್ಲಿ ಮುದ್ರಿಸಿ ಸರಬರಾಜು ಮಾಡುವಂತೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿತು. |
| 4 | ಮೂಡಲಹಿಪ್ಪೆ ಗ್ರಾಮದ ಖಾಸಗಿ ಜಮೀನಿನಲ್ಲಿ ಸರ್ಕಾರಿ ಕಛೇರಿಗಳ ಕಟ್ಟಡಗಳನ್ನು ನಿರ್ಮಿಸಿದ್ದು, ಪರಿಹಾರವನ್ನು ನೀಡುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹೊಳೆನರಸೀಪುರ ತಾ: ಮೂಡಲಹಿಪ್ಪೆ ಗ್ರಾಮದಲ್ಲಿ ಬಹಳ ಹಿಂದೆ ಖಾಸಗಿ ವ್ಯಕ್ತಿಯೊಬ್ಬರು ದಾನವಾಗಿ ನೀಡಿದ ಜಮೀನಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಯವರ ವಸತಿ ಗೃಹ ಮತ್ತು ಪಶುಚಿಕಿತ್ಸಾ ಕೇಂದ್ರದ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ. ಆದರೆ ದಾನಪತ್ರ ಈಗ ಲಭ್ಯವಿರುವುದಿಲ್ಲ. ಸದರಿ ಜಮೀನಿನ ಮಾಲೀಕರು ಈಗ ಪರಿಹಾರ ಹಣವನ್ನು ನೀಡುವಂತೆ ನ್ಯಾಯಾಲಯದಲ್ಲಿ ದಾವೆಯನ್ನು ಹೂಡಿದ್ದು, ನ್ಯಾಯಾಲಯದಿಂದ ಪರಿಹಾರದ ಹಣವನ್ನು ಭರಿಸುವಂತೆ ಆದೇಶ ನೀಡಿರುತ್ತದೆ. ಆದ್ದರಿಂದ, ಸಂಬಂಧಪಟ್ಟ ಇಲಾಖೆಯವರು ಅವಶ್ಯ ಪರಿಹಾರದ ಹಣವನ್ನು ಭರಿಸುವ ಬಗ್ಗೆ ಸಭೆಯಲ್ಲಿ ನಿರ್ಣಯವನ್ನು ಮಾಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ ಮೂಡಲಹಿಪ್ಪೆ ಗ್ರಾಮದಲ್ಲಿ ಖಾಸಗಿಯವರ ಜಮೀನಿನಲ್ಲಿ ನಿರ್ಮಾಣ ಮಾಡಲಾಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಯವರ ವಸತಿ ಗೃಹ ಮತ್ತು ಪಶುಚಿಕಿತ್ಸಾ ಕೇಂದ್ರದ ಕಟ್ಟಡಗಳಿಗೆ ಸಂಬಂಧಿಸಿದಂತೆ, ನ್ಯಾಯಾಲಯದ ಆದೇಶದಂತೆ, ಮಾಲೀಕರಿಗೆ ಪರಿಹಾರ ಧನವನ್ನು ಸಂಬಂಧಪಟ್ಟ ಇಲಾಖೆಯವರು ಭರಿಸುವಂತೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| | ಸಭೆಯಲ್ಲಿ ಇನ್ನಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

(ಬಿ.ಆರ್.ಸತ್ಯನಾರಾಯಣ),
ಅಧ್ಯಕ್ಷರು,
ಜಿಲ್ಲಾ ಪಂಚಾಯಿತಿ, ಹಾಸನ.